# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಾಸರಹಳ್ಳಿ ವಲಯ, ಹೆಗ್ಗನಹಳ್ಳಿ ಉಪವಿಭಾಗ

## ವಾರ್ಡ್ ನಂ.71 : ಹೆಗ್ಗನಹಳ್ಳಿ

**ದಿನಾಂಕ: 03.04.2021 ರಂದು ಬೆಳಿಗ್ಗೆ 11.00 ಗಂಟೆಗೆ ಶ್ರೀ ಬಿ.ಆರ್ ರವಿಕುಮಾರ್ ನೋಡಲ್ ಅಧಿಕಾರಿ, ವಾರ್ಡ್ 71 ರವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೆಗ್ಗನಹಳ್ಳಿ ಉಪವಿಭಾಗ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು:**

ಸಭೆಯಲ್ಲಿ ಹಾಜರಿದ್ದವರು:

| ಕ್ರಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಬಿ.ಆರ್ ರವಿಕುಮಾರ್ | ನೋಡಲ್ ಅಧಿಕಾರಿ-ವಾರ್ಡ್ ನಂ.71, ಸಹಾಯಕ ನಿರ್ದೇಶಕರು (ಪಶುಪಾಲನೆ) |
| 2 | ಶ್ರೀ ಮಂಜುನಾಥ್ ಡಿ ಎಸ್ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಹಾಗೂ ಸಂಚಾಲಕರು-ವಾರ್ಡ್ 71 |
| 3 | ರಾಮಣ್ಣ | ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.71 |
| 4 | ಸುರೇಶ್ ಎಂ | ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.71 |
| 5 | ಚಂದ್ರ ಜೆ | ಮಾರ್ಷಲ್ |
| 6 | ವೆಂಕಟರಾಜು | ಸ್ಥಳೀಯ ನಾಗರೀಕರ ಕಲ್ಯಾಣ ಸಂಘ (ಹೆಗ್ಗನಹಳ್ಳಿ ನಾಗರೀಕರ ಹಿತ ರಕ್ಷಣಾ ವೇದಿಕೆ) |
| 7 | ಬಿ.ಎಸ್.ಗಿರೀಗೌಡ | ಸ್ಥಳೀಯ ನಾಗರೀಕರ ಕಲ್ಯಾಣ ಸಂಘ |

**:ನಡಾವಳಿಯ ವರದಿ:**

➤ ಕಾರ್ಯದರ್ಶಿಗಳಾದ ಶ್ರೀ ಡಿ.ಎಸ್.ಮಂಜುನಾಥ್ ಮಾತನಾಡುತ್ತಾ ಸಭೆಗೆ ಹಾಜರಾದ ನೋಡಲ್ ಅಧಿಕಾರಿ ಹಾಗೂ ಪಾಲಿಕೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತ ಕೋರಿದರು.

- **ಸ್ವಚ್ಛತೆ ಮತ್ತು ಘನ ತ್ಯಾಜ್ಯ ನಿರ್ವಹಣೆ ಬಗ್ಗೆ:**
  - ಸುರೇಶ್ ಎಂ, ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.71 ರವರು ಮಾತನಾಡಿ ಕಸದ ಆಟೋಗಳಿಗೆ ಜಿ.ಪಿ.ಎಸ್ ಅಳವಡಿಸಲಾಗಿದ್ದು, ಆಟೋಗಳು ಬಾರದಿದ್ದಲ್ಲಿ ತಮಗೆ ತಿಳಿಸಲು ಕೋರಿದರು.
  - ಬಿ.ಎಸ್.ಗಿರೀಗೌಡ ರವರು ಮಾತನಾಡುತ್ತಾ, ಲಕ್ಷ್ಮಣನಗರ, ಸಂಜೀವಿನಿ ನಗರ 1ನೇ ಹಂತ, 2ನೇ ಹಂತ ಹಾಗೂ 3ನೇ ಹಂತದಲ್ಲಿ ಸೊಳ್ಳೆಗಳ ಕಾಟ ಜಾಸ್ತಿ ಇರುವುದರಿಂದ ಸೊಳ್ಳೆ ಔಷಧಿ ಸಿಂಪಡಿಸಲುಕೋರಿದರು.

- ಸುರೇಶ್ ಎಂ, ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.71 ರವರು ಪ್ರತಿಕ್ರಿಯಿ ಕ್ರಮವಹಿಸಲಾಗುವುದು ಎಂದು ತಿಳಿಸಿದರು.

- **ಕೋವಿಡ್-19, ಸಾಂಕ್ರಾಮಿಕ ರೋಗದ ಬಗ್ಗೆ**
  - ರಾಮಣ್ಣ, ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.71 ರವರು ಮಾತಾನಾಡಿ ವಾರ್ಡ್ 71ರ ವ್ಯಾಪ್ತಿಯಲ್ಲಿ ಪ್ರತಿ ದಿನ 180-200 ಟೆಸ್ಟ್ ನಡೆಸಲಾಗಿದ್ದು, ಇವುಗಳಲ್ಲಿ ಬೆರಳಣಿಕೆ ಸಂಖ್ಯೆಯಲ್ಲಿ ಸೋಂಕಿತರು ಕಂಡುಬರುತ್ತಿದ್ದು, ಸಾರ್ವಜನಿಕರಲ್ಲಿ ಹಾಗೂ ಬೀದಿ ವ್ಯಾಪಾರಿಗಳಲ್ಲಿ ಸ್ವಚ್ಛತೆ ಹಾಗೂ ಸಾಮಾಜಿಕ ಅಂತರ ಕಾಯ್ದುಕೊಳ್ಳುವ ಬಗ್ಗೆ ಅರಿವು ಮೂಡಿಸಲಾಗಿದೆ ಎಂದು ತಿಳಿಸಿದರು. ಹಾಗೂ ವ್ಯಾಕ್ಸಿನೇಷನ್ ಮಾಡಿಸಲು ಅರಿವು ಮೂಡಿಸಲಾಗುತ್ತಿದೆ ಎಂದು ತಿಳಿಸಿದರು.
  - ಚಂದ್ರ ಜೆ, ಮಾರ್ಷಲ್ ರವರು ಮಾತನಾಡಿ, ಜನರು ಗುಂಪು ಗುಂಪಾಗಿ ಸೇರುವ ಕಡೆಗಳಾದ, ಹೋಟೆಲ್, ಅಂಗಡಿಗಳು, ದೇವಸ್ಥಾನ ಇನ್ನಿತರ ತಾಣಗಳಲ್ಲಿ ಸಾರ್ವಜನಿಕರಲ್ಲಿ ಸಾಮಾಜಿಕ ಅಂತರ ಕಾಯ್ದುಕೊಳ್ಳುವ ಹಾಗೂ ಮಾಸ್ಕ್ ಧರಿಸುವ ಬಗ್ಗೆ ಅರಿವು ಮೂಡಿಸಲಾಗುತ್ತಿದೆ ಎಂದು ತಿಳಿಸಿದರು.
- **ಒಳಚರಂಡಿ ಮತ್ತು ನೀರು ಸಂಪರ್ಕಗಳಿಗೆ ಸಂಬಂಧಿಸಿದ ಸಮಸ್ಯೆಗಳ ಬಗ್ಗೆ**
  - ಬಿ.ಎಸ್.ಗಿರೀಗೌಡ ರವರು ಮಾತನಾಡುತ್ತಾ, ಗಜಾನನ ನಗರ, ಸುಂಕದಕಟ್ಟೆ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಇದ್ದು ಆದಷ್ಟು ಶೀಘ್ರವಾಗಿ ಕ್ರಮ ಕೈಗೊಳ್ಳಲು ಕೋರಿದರು.
  - ವೆಂಕಟರಾಜು, ರವರು ದನಿಗೂಡಿಸಿ ಹೊಯ್ಸಳನಗರದ 15ನೇ & 16ನೇ ಅಡ್ಡರಸ್ತೆಯಲ್ಲಿ ಕುಡಿಯುವ ನೀರು ಸರಿಯಾಗಿ ಬರುತ್ತಿಲ್ಲ ಈ ಬಗ್ಗೆ ಕ್ರಮ ವಹಿಸಲು ಕೋರಿದರು.
    - ಈ ಬಗ್ಗೆ ನೋಡಲ್ ಅಧಿಕಾರಿರವರು ಪ್ರತಿಕ್ರಿಯಿಸಿ ಸಂಬಂಧಪಟ್ಟ ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿರವರೊಂದಿಗೆ ಮಾತನಾಡಿ ಕ್ರಮಕೈಗೊಳ್ಳಲು ಸೂಚಿಸಲಾಗುವುದೆಂದು ತಿಳಿಸಿದರು.
- **ವಿದ್ಯುತ್ ಸಮಸ್ಯೆಗಳ ಬಗ್ಗೆ**
  - ವೆಂಕಟರಾಜು, ರವರು ಮಾತನಾಡುತ್ತಾ, ಸುಂಕದಕಟ್ಟೆಯ ಸಮೃದ್ಧಿ ಹೋಟೆಲ್ ಹತ್ತಿರ ವಿದ್ಯುತ್ ಕಂಬವು ವಾಲಿದ್ದು, ಅಪಾಯಕಾರಿ ಸ್ಥಿತಿಯಲ್ಲಿರುತ್ತದೆ. ಆದ್ದರಿಂದ ಬದಲಿ ಕಂಬವನ್ನು ಅಳವಡಿಸಲು ಕೋರಿದರು.
    - ಈ ಬಗ್ಗೆ ನೋಡಲ್ ಅಧಿಕಾರಿರವರು ಸ್ಥಳದಲ್ಲಿಯೇ ದೂರವಾಣಿ ಮುಖಾಂತರ ಸಂಬಂಧ ಪಟ್ಟ ಇಲಾಖಾ ಅಧಿಕಾರಿಗಳೊಂದಿಗೆ ಮಾತನಾಡಿ ಕ್ರಮವಹಿಸಲು ಸೂಚಿಸಿದರು.

➢ ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿ/ನೌಕರರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆಯೂ ಈ ಸಭೆಗಳಲ್ಲಿ ಪೂರ್ವತಯಾರಿಯೊಂದಿಗೆ ಪಾಲ್ಗೊಂಡು ವಾರ್ಡಿನ ಕುಂದುಕೊರತೆಗಳತ್ತ ಗಮನಹರಿಸಿ ವಾರ್ಡ್ ಅಭಿವೃದ್ಧಿ ಪಡಿಸಲು ಸಹಕಾರ ನೀಡಬೇಕೆಂದು ಮನವಿ ಮಾಡಿದರು.

➢ ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ಡಿ.ಎಸ್.ಮಂಜುನಾಥ್ ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿಗಳು/ನೌಕರರಿಗೂ ವಂದನೆಯನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

**ಸದಸ್ಯ ಕಾರ್ಯದರ್ಶಿ-ವಾರ್ಡ್ 71 ಹಾಗೂ**
**ಸಹಾಯಕ ಅಭಿಯಂತರರು,**

**(ಬಿ.ಆರ್ ರವಿಕುಮಾರ್)**
**ನೋಡಲ್ ಅಧಿಕಾರಿ ವಾರ್ಡ್-71**

ಪ್ರತಿಯನ್ನು:
1) ಮಾನ್ಯ ಶಾಸಕರು, ದಾಸರಹಳ್ಳಿ ವಿಧಾನಸಭಾ ಕ್ಷೇತ್ರ, ರವರ ಆದ್ಯ ಗಮನಕ್ಕೆ ಕಳುಹಿಸಿದೆ.
2) ಜಂಟಿ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
3) ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ ವಿಭಾಗ) ರವರ ಮಾಹಿತಿಗಾಗಿ ಕಳುಹಿಸಿದೆ.

4) ಸಹಾಯಕ ಕಾರ್ಯಪಾಲಕ ಅಭಿಯಂತರರು (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
5) ಸಹಾಯಕ ಕಂದಾಯ ಅಧಿಕಾರಿ (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
6) ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.70 ರವರ ಮಾಹಿತಿಗಾಗಿ
7) ಸಹಾಯಕ ಅಭಿಯಂತರರು (ವಿದ್ಯುತ್ ಬೆಸ್ಕಾಂ) ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
8) ಸಹಾಯಕ ಅಭಿಯಂತರರು (ವಿದ್ಯುತ್ (ಬೀದಿದೀಪ) ಬಿಬಿಎಂಪಿ ರವರ ಮಾಹಿತಿಗಾಗಿ ಸೂಕ್ತ ಕ್ರಮಕ್ಕಾಗಿ
9) ವಾರ್ಡ್ ಸಮಿತಿ ಸಭೆಯ ಸದಸ್ಯರಿಗೆ ಮಾಹಿತಿಗಾಗಿ ಕಳುಹಿಸಿದೆ.
10) ಕಛೇರಿ ಕಡತಕ್ಕೆ